# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☎ : 0816-2255650, 2273511 ಫ್ಯಾಕ್ಸ್ :0816-2270719


ಸಂಖ್ಯೆ:ತುವಿ:ಪವಿ:ಪಶು:2023-24 : 1141 ದಿನಾಂಕ:29.01.2024

## : ಅಧಿಸೂಚನೆ :

ವಿಷಯ : 2019-20 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದು ಈಗಾಗಲೇ ಪರೀಕ್ಷೆ ಬರೆದು ಅನುತ್ತೀರ್ಣರಾಗಿರುವ ಸ್ನಾತಕ ಶಿಕ್ಷಣ (ಬಿ.ಇಡಿ.) ಪದವಿಯ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024 ರ ಮಾರ್ಚ್/ಏಪ್ರಿಲ್ ಮಾಹೆಗಳಲ್ಲಿ ನಡೆಯಲಿರುವ ಸ್ನಾತಕ ಶಿಕ್ಷಣ (ಬಿ.ಇಡಿ.) ಪದವಿಯ I, II, III & IV ನೇ ಸೆಮಿಸ್ಟರ್‌ಗಳ 2019-20 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದು ಈಗಾಗಲೇ ಪರೀಕ್ಷೆ ಬರೆದು ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷೆಗಳಿಗೆ ಹಾಜರಾಗುವ ಅರ್ಹ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು.

### ಶುಲ್ಕ ಪಾವತಿಸಲು ವಿವರವಾದ ದಿನಾಂಕಗಳು ಈ ಕೆಳಗಿನಂತಿವೆ.

| ಕ್ರಮ ಸಂಖ್ಯೆ | ಶುಲ್ಕದ ವಿವರ | ದಿನಾಂಕ |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 12.02.2024 |
| 2. | ವಿದ್ಯಾರ್ಥಿಗಳಿಗೆ ರೂ. 100-00/- ಗಳ ದಂಡ ಶುಲ್ಕದೊಂದಿಗೆ ಪಾವತಿಸಲು ಕೊನೆಯ ದಿನಾಂಕ | 15.02.2024 |
| 3. | ವಿದ್ಯಾರ್ಥಿಗಳಿಗೆ ರೂ. 500-00/- ಗಳ ವಿಶೇಷ ದಂಡ ಶುಲ್ಕದೊಂದಿಗೆ ಪಾವತಿಸಲು ಕೊನೆಯ ದಿನಾಂಕ | 17.02.2024 |
| 4. | ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 20.02.2024 |
| 5. | ಕಾಲೇಜಿನವರು ವಿಶ್ವವಿದ್ಯಾನಿಲಯದ ಖಾತೆಗೆ ಪಾವತಿಸಲು ಕೊನೆಯ ದಿನಾಂಕ | 22.02.2024 |

### ಶುಲ್ಕಗಳ ವಿವರ

| ಕ್ರ. ಸಂ. | ಸೆಮಿಸ್ಟರ್ | ಕೋರ್ಸ್ | ಪರೀಕ್ಷಾ ಶುಲ್ಕ | |
|---|---|---|---|---|
| 1. | I, II, III & IV (ಪ್ರತಿ ಸೆಮಿಸ್ಟರ್‌ಗೆ) | ಬಿ.ಇಡಿ. | ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿಗೆ ರೂ. 3,500-00/- | ಒಂದು ವಿಷಯಕ್ಕೆ ರೂ. 1000-00/- |

ಪ್ರತಿ ವಿದ್ಯಾರ್ಥಿಯು ಸೆಮಿಸ್ಟರ್‌ವಾರು ಪ್ರತ್ಯೇಕ ಪರೀಕ್ಷಾ ಶುಲ್ಕವನ್ನು ಪಾವತಿಸುವುದು.

(...2 ನೇ ಪುಟಕ್ಕೆ)

ಈ ಮೇಲೆ ಸೂಚಿಸಿದ ಪರೀಕ್ಷಾ ಶುಲ್ಕದೊಂದಿಗೆ ಎಲ್ಲಾ ವಿದ್ಯಾರ್ಥಿಗಳು ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು.

| ಕ್ರ. ಸಂ. | ಇತರೆ ಶುಲ್ಕಗಳ ವಿವರ | ಮೊತ್ತ (ರೂ. ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ ( ಪ್ರತಿ ಸೆಮಿಸ್ಟರ್‌ಗೆ) | 300-00/- |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 100-00/- |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 50-00/- |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Processing fee) ( ಪ್ರತಿ ಸೆಮಿಸ್ಟರ್‌ಗೆ) | 100-00/- |

* ಆನ್‌ಲೈನ್ ಅರ್ಜಿ ಶುಲ್ಕ ರೂ. 100-00/- ಗಳಲ್ಲಿ ರೂ. 20-00/- ಗಳನ್ನು ಕಾಲೇಜಿನವರು ಉಳಿಸಿಕೊಂಡು ಉಳಿದ ರೂ. 80-00/- ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

ಎಲ್ಲಾ ವರ್ಗಗಳ ಪೂರಕ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ (ಸೆಮಿಸ್ಟರ್‌ವಾರು) ಪರೀಕ್ಷಾ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಿಕೊಳ್ಳುವುದು.

**ವಿಶ್ವವಿದ್ಯಾನಿಲಯದ ನಿಯಮಾನುಸಾರ ಪರೀಕ್ಷಾ ಶುಲ್ಕ ಪಾವತಿಸಲು ಅರ್ಹತೆ ಇಲ್ಲದಿದ್ದ ಪಕ್ಷದಲ್ಲಿ ಅಂತಹ ವಿದ್ಯಾರ್ಥಿಗಳಿಂದ ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಸ್ವೀಕರಿಸಲು ಹಾಗೂ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.**

ವಿಶ್ವವಿದ್ಯಾನಿಲಯದಿಂದ ಅನುಮೋದನೆ ಪಡೆದ ಅರ್ಹ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ RTGS/NEFT ಮೂಲಕ ಎಸ್.ಬಿ.ಐ. ಖಾತೆ ನಂ. : 36954908103 ಗೆ **ಪರೀಕ್ಷಾ ಶುಲ್ಕವನ್ನು ದಿನಾಂಕ:22.02.2024 ರೊಳಗೆ ಪಾವತಿಸುವುದು. ಪಾವತಿಸಿದ ಮೂಲ ಪ್ರತಿಯನ್ನು ಪರೀಕ್ಷಾಂಗ ವಿಭಾಗಕ್ಕೆ ಹಾಗೂ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಹಣಕಾಸು ವಿಭಾಗಕ್ಕೆ ಸಲ್ಲಿಸುವುದು.**

ಸೈದ್ಧಾಂತಿಕ (ಪಠ್ಯವಿಷಯ) ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ಪ್ರಕಟಿಸಲಾಗುವುದು.

ಎಲ್ಲಾ ಪ್ರಾಂಶುಪಾಲರುಗಳು ಸಹಕರಿಸಬೇಕಾಗಿ ಕೋರಲಾಗಿದೆ.

9/2/24

ಕುಲಸಚಿವರು (ಪರೀಕ್ಷಾಂಗ)

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಶಿಕ್ಷಣ (ಬಿ.ಇಡಿ.) ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

(...3 ನೇ ಪುಟಕ್ಕೆ)

ಪ್ರತಿಗಳು :

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಈ ಅಧಿಸೂಚನೆಯನ್ನು ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಬಿ.ಇಡಿ. ಕಾಲೇಜುಗಳಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.)**
7. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಕಛೇರಿ ಪ್ರತಿ.